**ಸಾಕ್ಷಿಗೆ ದಿನಾಂಕ 26-03-2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀ.ಎಂ ಎಂ  ವಕೀಲರಿಂದಃ

1. ನಾನು ಈ ಪ್ರಕರಣದಲ್ಲಿ, ಅರ್ಜಿದಾರನಾಗಿರುತ್ತೇನೆ.  ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ.  ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ.  ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ  ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ  ಈ ಕೆಳಕಂಡ ದಾಖಲೆಗಳನ್ನು  ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು  ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 1 | ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿ |
| ನಿ.ಪಿ 2 | ಪ್ರಥಮ ಹೇಳಿಕೆಯ ದೃಢೀಕೃತ ಪ್ರತಿ |
| ನಿ.ಪಿ 3 | ಕಚ್ಚಾ ನಕಾಶೆಯ ದೃಢೀಕೃತ ಪ್ರತಿ |
| ನಿ.ಪಿ 4 | ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿ |
| ನಿ.ಪಿ 5 ಮತ್ತು 6 | 2 ವಾಹನ ಅಮಾನತು ಪಂಚನಾಮೆಯ ದೃಢೀಕೃತ ಪ್ರತಿಗಳು |
| ನಿ.ಪಿ 7 ಮತ್ತು 8 | 2 ಎಂ ವಿ ಐ ವರದಿಯ ದೃಢೀಕೃತ ಪ್ರತಿಗಳು |
| ನಿ.ಪಿ 9 | ಎಂ ಎಲ್ ಸಿ ಎಕ್ಸ್ ಟ್ರಾಕ್ಟ್ ನ ದೃಢೀಕೃತ ಪ್ರತಿ |
| ನಿ.ಪಿ 10 | ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿ |
| ನಿ.ಪಿ 11 | ದೋಷಾರೋಪಣ ಪತ್ರದ ದೃಢೀಕೃತ ಪ್ರತಿ |
| ನಿ.ಪಿ 12 | ಆಧಾರ್ ಕಾರ್ಡ್‌ನ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |

| | |
|---|---|
| ನಿ.ಪಿ 13 | ಡಿ ಎಲ್ ನ ನೋಟರಿಕೃತ ದಾಖಲೆ |
| ನಿ.ಪಿ 14 | ಡಿಸ್ಚಾರ್ಜ್ ಸಮರಿ |
| ನಿ.ಪಿ 15 | 33 ಮೆಡಿಕಲ್ ಬಿಲ್ಲುಗಳು ಮೊತ್ತ ರೂ.90,558/- (ಅವುಗಳನ್ನು ಕ್ರಮವಾಗಿ ಕ್ರಮ ಸಂಖ್ಯೆ 1 ರಿಂದ 33 ಎಂದು ತೋರಿಸಲಾಗಿರುತ್ತದೆ.) |
| ನಿ.ಪಿ 16 | 28 ಔಷಧಿ ಚೀಟಿಗಳು (ಅವುಗಳನ್ನು ಕ್ರಮವಾಗಿ ಕ್ರಮ ಸಂಖ್ಯೆ 1 ರಿಂದ 28 ಎಂದು ತೋರಿಸಲಾಗಿರುತ್ತದೆ.) |

3. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಪ್ರಕರಣದಲ್ಲಿ ಕೋರಿರುವ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀಸವಾಲುಃ ಎದುರುದಾರರು ಗೈರುಹಾಜರು. ಈ ಕಾರಣದಿಂದ ಪಾಟೀಸವಾಲನ್ನು ಮುಂದೂಡಲಾಯಿತು.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**